# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ನಂ.16, 2ನೇ ಮತ್ತು 3ನೇ ಮಹಡಿ, ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080,
ಇ-ಮೇಲ್: sec.karnataka@ka.gov.in ದೂರವಾಣಿ: 080-22205189.

**ಆದೇಶ ಸಂಖ್ಯೆ: SECK/ULB/GELN/1/2025-ULB, ದಿನಾಂಕ: 10-07-2025**

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243-ಜೆಡ್ಎ ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ರ ಪ್ರಕರಣ 17 ಮತ್ತು 19 ರನ್ವಯ ಹಾಗೂ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 3(1) ರನ್ವಯ **ಅನುಬಂಧ-01** ರಲ್ಲಿ ಹೆಸರಿಸಲಾದ ಹೊಸದಾಗಿ ರಚನೆಯಾಗಿರುವ 05 ಪಟ್ಟಣ ಪಂಚಾಯತಿಗಳಿಗೆ ಸಾರ್ವತ್ರಿಕ ಚುನಾವಣೆಯನ್ನು ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ **ಅನುಬಂಧ -02** ರಲ್ಲಿ ಹೆಸರಿಸಲಾದ ವಾರ್ಡುಗಳಿಗೆ ಉಪ ಚುನಾವಣೆಯನ್ನು ಈ ಕೆಳಕಂಡ ಚುನಾವಣಾ ವೇಳಾಪಟ್ಟಿಯನುಸಾರ ನಡೆಸಲು ಆದೇಶಿಸಲಾಗಿದೆ.

## ಚುನಾವಣಾ ವೇಳಾಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 29/07/2025 ಮಂಗಳವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 05/08/2025 ಮಂಗಳವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 06/08/2025 ಬುಧವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 08/08/2025 ಶುಕ್ರವಾರ |
| 5 | ಮತದಾನ ಅವಶ್ಯಕವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗಳ ವರೆಗೆ) | **17/08/2025 ಭಾನುವಾರ** |
| 6 | ಮರು ಮತದಾನ ಇದ್ದಲ್ಲಿ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗಳ ವರೆಗೆ) | 19/08/2025 ಮಂಗಳವಾರ |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | **20/08/2025 ಬುಧವಾರ** |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 20/08/2025 ಬುಧವಾರ |

**ಸದಾಚಾರ ಸಂಹಿತೆಯು ದಿನಾಂಕ: 29/07/2025 ರಿಂದ ದಿನಾಂಕ: 20/08/2025 ರವರೆಗೆ ಸಾರ್ವತ್ರಿಕ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ.**

ಜಿಲ್ಲಾಧಿಕಾರಿಗಳು, ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ-1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯ ಅನುಬಂಧದಲ್ಲಿ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡ್‌ನ ಸಂಖ್ಯೆ ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ಕಚೇರಿ ಮತ್ತು ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಅಂದೇ ಇ-ಮೇಲ್ ಮುಖಾಂತರ ರಾಜ್ಯ ಚುನಾವಣಾ ಆಯೋಗಕ್ಕೂ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು, ಅದೇ ದಿನದಂದು ಪ್ರಪತ್ರ-1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಮತ್ತು ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಮತ್ತು ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**<u>ವಿಶೇಷ ಸೂಚನೆ:-</u>**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿರುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.

2. ಚುನಾವಣಾ ಕಾರ್ಯಕ್ಕೆ ನಿಯೋಜಿತಗೊಂಡ ಚುನಾವಣಾಧಿಕಾರಿ ಮತ್ತು ಸಹಾಯಕ ಚುನಾವಣಾಧಿಕಾರಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಮತ್ತು ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ, ಸುತ್ತೋಲೆ ಹಾಗೂ ನಿರ್ದೇಶನ ಪತ್ರಗಳ ಪ್ರತಿಗಳನ್ನು ನೀಡುವುದು.

3. **ಘೋಷಣಾ ಪತ್ರ /ಪ್ರಮಾಣ ಪತ್ರ:** ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು, ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ

ವಿವರಗಳು, ತನ್ನ ಸ್ವ-ವಿವರ, ವಿದ್ಯಾರ್ಹತೆ, ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.

4. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್‌ಇಸಿ 10 ಎಂಐಎಸ್‌ಸಿ 2016, ದಿನಾಂಕ:29/06/2016 ಮತ್ತು ತಿದ್ದುಪಡಿ ದಿನಾಂಕ:06/07/2016 ರಂತೆ ಕ್ರಮವಹಿಸುವುದು.

5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.

6. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2019, ಬೆಂಗಳೂರು, ದಿನಾಂಕ: 27/04/2020 ರಂತೆ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಪ್ರಕರಣ 22ಕ್ಕೆ ಮತ್ತು ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ, 1976ರ ಪ್ರಕರಣ 14ಕ್ಕೆ ತಿದ್ದುಪಡಿ ಮಾಡಲಾಗಿದ್ದು, "ಅರ್ಹ ಮತದಾರನು, ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳ ಪೈಕಿ ಯಾವೊಬ್ಬ ಅಭ್ಯರ್ಥಿಯ ಪರವಾಗಿ ತನ್ನ ಮತವನ್ನು ಚಲಾಯಿಸಲು ಇಚ್ಛಿಸದಿರುವ ಸಂದರ್ಭದಲ್ಲಿ ಆತನು "None of the above (NOTA)" (ಮೇಲಿನ ಯಾರೊಬ್ಬರಿಗೂ ಇಲ್ಲ) ಎಂದು ಮತಚಲಾಯಿಸಲು" ಅವಕಾಶ ಕಲ್ಪಿಸಲಾಗಿದೆ.

7. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ 28 ಇಯುಬಿ 2018, ದಿನಾಂಕ: 01/06/2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವುದು.

ಆದೇಶಾನುಸಾರ

Digitally signed by
NARAPPA REVANASIDDAPPA NAGARAJU
Date: 11-07-2025 13:01:35

ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ,**

ಜಿಲ್ಲಾಧಿಕಾರಿಗಳು, ಕೋಲಾರ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಬೆಳಗಾವಿ, ವಿಜಯಪುರ, ಹಾವೇರಿ, ರಾಯಚೂರು ಮತ್ತು ಕಲಬುರಗಿ ಜಿಲ್ಲೆಗಳು.

**ಆದೇಶ ಸಂಖ್ಯೆ: SECK/ULB/GELN/1/2025-ULB, ದಿನಾಂಕ: 09-07-2025**

**ಹೊಸದಾಗಿ ರಚನೆಯಾಗಿರುವ ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಚುನಾವಣೆ**
**ಅನುಬಂಧ -01**

| ಕ್ರ.ಸಂ | ಜಿಲ್ಲೆ ಹೆಸರು | ನಗರ ಸ್ಥಳೀಯ ಸಂಸ್ಥೆ ಹೆಸರು | ತರಹೆ(ಮಹಾನಗರಪಾಲಿಕೆ/ ನಗರಸಭೆ/ಪುರಸಭೆ/ ಪಟ್ಟಣ ಪಂಚಾಯತಿ) | ಒಟ್ಟು ವಾರ್ಡು |
|---|---|---|---|---|
| 1 | ಕೋಲಾರ | ವೇಮಗಲ್ ಕುರುಗಲ್ | ಪಟ್ಟಣ ಪಂಚಾಯತಿ | 17 |
| 2 | ಚಿಕ್ಕಮಗಳೂರು | ಅಜ್ಜಂಪುರ | ಪಟ್ಟಣ ಪಂಚಾಯತಿ | 11 |
| 3 | ದಕ್ಷಿಣ ಕನ್ನಡ | ಕಡಬ | ಪಟ್ಟಣ ಪಂಚಾಯತಿ | 13 |
| 4 | ಹಾವೇರಿ | ರಟ್ಟೆಹಳ್ಳಿ | ಪಟ್ಟಣ ಪಂಚಾಯತಿ | 15 |
| 5 | ಕಲಬುರಗಿ | ಕಾಳಗಿ | ಪಟ್ಟಣ ಪಂಚಾಯತಿ | 11 |

**ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ವಾರ್ಡುಗಳ ಉಪ ಚುನಾವಣೆ**
**ಅನುಬಂಧ -02**

| ಕ್ರ.ಸಂ | ಜಿಲ್ಲೆ ಹೆಸರು | ನಗರ ಸ್ಥಳೀಯ ಸಂಸ್ಥೆ ಹೆಸರು | ತರಹೆ(ಮಹಾನಗರಪಾಲಿಕೆ/ ನಗರಸಭೆ/ಪುರಸಭೆ/ ಪಟ್ಟಣ ಪಂಚಾಯತಿ) | ವಾರ್ಡ್ ಸಂಖ್ಯೆ |
|---|---|---|---|---|
| 1 | ಬೆಳಗಾವಿ | ಉಗಾರಖುರ್ದ | ಪುರಸಭೆ | 15 |
| 2 | ವಿಜಯಪುರ | ನಿಡಗುಂದಿ | ಪಟ್ಟಣ ಪಂಚಾಯತಿ | 5 |
| 3 | ರಾಯಚೂರು | ಸಿರವಾರ | ಪಟ್ಟಣ ಪಂಚಾಯತಿ | 12 |

Digitally signed by
NARAPPA REVANASIDDAPPA NAGARAJU
Date: 09-07-2025 16:05:06

ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.